# ಕರ್ನಾಟಕ ವಿಧಾನ ಪರಿಷತ್ತು

## ನೂರ ಐವತ್ತನೆಯ ಅಧಿವೇಶನ

## ಕಾರ್ಯಕಲಾಪಗಳ ಪಟ್ಟಿ

## ಮಂಗಳವಾರ, ದಿನಾಂಕ:11ನೇ ಜುಲೈ, 2023

## (ಸಮಯ: ಬೆಳಗ್ಗೆ: 11.00 ಗಂಟೆಗೆ)

* * *

## 01. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಆರನೆಯ ಪಟ್ಟಿ

ಆ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಆರನೆಯ ಪಟ್ಟಿ

## 02. ಸಭೆಯ ಮುಂದಿಡಲಾಗುವ ಕಾಗದ ಪತ್ರಗಳು

**ಶ್ರೀ ಸಿದ್ದರಾಮಯ್ಯ (ಮಾನ್ಯ ಮುಖ್ಯಮಂತ್ರಿಗಳು)** ಅವರು:-

ಭಾರತ ಸಂವಿಧಾನದ 151(2)ನೇ ಅನುಚ್ಛೇದದ ಮೇರೆಗೆ ಮಾರ್ಚ್, 2022ಕ್ಕೆ ಕೊನೆಗೊಂಡ ವರ್ಷಕ್ಕೆ ಭಾರತದ ಲೆಕ್ಕನಿಯಂತ್ರಕರು ಮತ್ತು ಮಹಾಲೆಕ್ಕಪರಿಶೋಧಕರ ರಾಜ್ಯ ಸರ್ಕಾರದ ಹಣಕಾಸಿನ ವ್ಯವಹಾರಗಳ ಲೆಕ್ಕಪರಿಶೋಧನಾ ವರದಿಯನ್ನು (2023ನೇ ವರ್ಷದ ವರದಿ ಸಂಖ್ಯೆ-2) ಸಭೆಯ ಮುಂದಿಡುವುದು.

## 03. ವರದಿಗಳನ್ನೊಪ್ಪಿಸುವುದು

ಅ. **ಶ್ರೀ ಹೆಚ್.ಎಸ್. ಗೋಪಿನಾಥ್ (ಸದಸ್ಯರು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶೇಷ ಸದನ ಸಮಿತಿ)** ಅವರು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಲ್ಲಿ ಕುಡಿಯುವ ನೀರು ಮತ್ತು ನೈರ್ಮಲ್ಯ ಕಾರ್ಯಕ್ರಮಕ್ಕೆ ಬಿಡುಗಡೆಯಾದ ಹಣವನ್ನು ಅವ್ಯವಹಾರ ಮಾಡಿರುವುದನ್ನು ಪರಿಶೀಲಿಸಲು ರಚಿಸಲಾಗಿರುವ ವಿಶೇಷ ಸದನ ಸಮಿತಿಯ ವರದಿಯನ್ನೊಪ್ಪಿಸುವುದು.

ಆ. **ಶ್ರೀ ಪಿ.ಹೆಚ್. ಪೂಜಾರ್, (ಅಧ್ಯಕ್ಷರು, ಹಕ್ಕುಬಾಧ್ಯತಾ ಸಮಿತಿ)** ಅವರು 2021-22ನೇ ಸಾಲಿನ ಕರ್ನಾಟಕ ವಿಧಾನ ಪರಿಷತ್ತಿನ ಹಕ್ಕುಬಾಧ್ಯತಾ ಸಮಿತಿಯ 100ನೇ ವರದಿಯನ್ನೊಪ್ಪಿಸುವುದು.

## 04. ರಾಜ್ಯಪಾಲರ ಭಾಷಣಕ್ಕೆ ಸಂಬಂಧಿಸಿದ ವಂದನಾರ್ಪಣಾ ಪ್ರಸ್ತಾವದ ಮೇಲಿನ ಮುಂದುವರೆದ ಚರ್ಚೆ

"2023ನೇ ಜುಲೈ, 03ರಂದು ಘನತೆವೆತ್ತ ರಾಜ್ಯಪಾಲರು ವಿಧಾನ ಮಂಡಲದ ಶಾಸಕರುಗಳನ್ನುದ್ದೇಶಿಸಿ ದಯಪಾಲಿಸಿದ ಭಾಷಣಕ್ಕಾಗಿ ಈ ಅಧಿವೇಶನದಲ್ಲಿ ಸೇರಿರುವ ವಿಧಾನ ಪರಿಷತ್ತಿನ ಶಾಸಕರಾದ ನಾವು ರಾಜ್ಯಪಾಲರಿಗೆ ಕೃತಜ್ಞತಾಪೂರ್ವಕವಾದ ವಂದನೆಗಳನ್ನು ಸಮರ್ಪಿಸಲು ಅಪ್ಪಣೆ ಕೋರುತ್ತೇವೆ" ಎಂದು ದಿನಾಂಕ:05.07.2023ರಂದು **ಶ್ರೀ ಯು.ಬಿ. ವೆಂಕಟೇಶ್** ರವರು ಸೂಚಿಸಿ **ಶ್ರೀ ಎಂ. ನಾಗರಾಜು** ಅವರು ಅನುಮೋದಿಸಿರುವ ಪ್ರಸ್ತಾವದ ಮೇಲೆ ಚರ್ಚೆ:

ನಾಲ್ಕನೇ ದಿನ

## 05. ಗಮನ ಸೆಳೆಯುವ ಸೂಚನೆಗಳು

01 **ಶ್ರೀ ನಿರಾಣಿ ಹಣಮಂತ್ ರುದ್ರಪ್ಪ** ಅವರು ಕೃಷ್ಣಾ ಮೇಲ್ದಂಡೆ ಯೋಜನೆಯಡಿಯಲ್ಲಿ ನಿರ್ಮಾಣವಾದ ಆಲಮಟ್ಟಿ ಜಲಾಶಯ ಹಿನ್ನೀರಿನಿಂದ ಭೂಮಿಯನ್ನು ಕಳೆದುಕೊಂಡ ಸಂತ್ರಸ್ಥರಿಗೆ ಭೂಪರಿಹಾರ ಧನವನ್ನು ಮಂಜೂರು ಮಾಡದಿರುವುದರಿಂದ ಹಾಗೂ ಪುನರ್ ವಸತಿ, ಪುನರ್ ನಿರ್ಮಾಣ ಕೇಂದ್ರಗಳಲ್ಲಿ ಮಂಜೂರಾದ ಕಾಮಗಾರಿಗಳನ್ನು ಪ್ರಾರಂಭಿಸದಿರುವುದರಿಂದ ಸಂತ್ರಸ್ಥರಿಗೆ ಆಗುತ್ತಿರುವ ತೊಂದರೆಗಳ ಬಗ್ಗೆ ಮಾನ್ಯ ಉಪ ಮುಖ್ಯಮಂತ್ರಿಗಳ ಗಮನ ಸೆಳೆಯುವುದು.

02 **ಶ್ರೀ ಕೆ.ಪಿ. ನಂಜುಂಡಿ ವಿಶ್ವಕರ್ಮ** ಅವರು ವಿಶ್ವಕರ್ಮ ಸಮಾಜದವರಿಗೆ ದೇವಸ್ಥಾನಗಳ ಆಡಳಿತ ಮಂಡಳಿಯಲ್ಲಿ ಅವಕಾಶ ಮಾಡಿಕೊಡುವ ಕುರಿತು ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರ ಗಮನ ಸೆಳೆಯುವುದು.

03 **ಶ್ರೀ ಮಧು ಜಿ. ಮಾದೇಗೌಡ** ಅವರು ಕರ್ನಾಟಕ ರಾಜ್ಯ ಸಹಾಯಕ ಪ್ರಾಧ್ಯಾಪಕರ ಅರ್ಹತಾ ಪರೀಕ್ಷೆ (ಕೆ.ಸೆಟ್) ಕಳೆದ 02 ವರ್ಷಗಳಿಂದ ನಡೆಸದಿರುವ ಕಾರಣ ವಿದ್ಯಾರ್ಥಿಗಳಿಗೆ ತೊಂದರೆಯಾಗುತ್ತಿರುವ ಕುರಿತು ಮಾನ್ಯ ಉನ್ನತ ಶಿಕ್ಷಣ ಸಚಿವರ ಗಮನ ಸೆಳೆಯುವುದು.

04. **ಶ್ರೀ ಮರಿತಿಬ್ಬೇಗೌಡ** ಅವರು ದೈಹಿಕ ಶಿಕ್ಷಣ ಪರಿವೀಕ್ಷಕರ ಗ್ರೂಪ್ "ಬಿ" ಹುದ್ದೆಯಿಂದ ಜಿಲ್ಲಾ ದೈಹಿಕ ಶಿಕ್ಷಣಾಧಿಕಾರಿಗಳ ಹುದ್ದೆಗೆ ಒಂದು ಬಾರಿಗೆ ವೃಂದ ಮತ್ತು ನೇಮಕಾತಿ ನಿಯಮಗಳಿಗೆ ವಿನಾಯಿತಿ ನೀಡಿ, ಮುಂಬಡ್ತಿ ನೀಡುವ ಕುರಿತು ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರ ಗಮನ ಸೆಳೆಯುವುದು.

## 06. ನಿಯಮ 330ರ ಮೇರೆಗೆ

01. **ಶ್ರೀ ಕೋಟ ಶ್ರೀನಿವಾಸ ಪೂಜಾರಿ** ಅವರು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ವ್ಯಾಪ್ತಿಯಲ್ಲಿನ ಗ್ರಾಮ ಪಂಚಾಯತ್‌ಗಳಲ್ಲಿ ದೈನಂದಿನ ಆಡಳಿತಾತ್ಮಕ ಸಮಸ್ಯೆಗಳು, ಪಂಚತಂತ್ರ ತಂತ್ರಾಂಶ ವ್ಯವಸ್ಥೆಯಲ್ಲಿರುವ ಲೋಪ ದೋಷಗಳು, ಸರ್ವರ್ ಸಮಸ್ಯೆ, ಸಿಬ್ಬಂದಿಗಳ ವೇತನ, ಇನ್ನಿತರೆ ಸಮಸ್ಯೆ ಹಾಗೂ ಬೇಡಿಕೆಗಳ ಕುರಿತು ಪ್ರಸ್ತಾಪಿಸುವುದು.

.3..

೦೨. **ಶ್ರೀ ಕೆ.ಎ. ತಿಪ್ಪೇಸ್ವಾಮಿ ಹಾಗೂ ಶ್ರೀ ಎಸ್.ಎಲ್. ಭೋಜೇಗೌಡ** ಅವರುಗಳು ನಂದಿನಿ ಹಾಲು ಉತ್ಪಾದಕ ಸಂಸ್ಥೆಯ ವಿರುದ್ಧ ಗುಜರಾತ್ ಅಮೂಲ್ ಸಂಸ್ಥೆ ಷಡ್ಯಂತರ ಹೂಡಿ ನಂದಿನಿ ಬ್ರಾಂಡ್‌ಗೆ ಮತ್ತು ಸಂಸ್ಥೆಗೆ ಧಕ್ಕೆ ತರುತ್ತಿರುವ ಮತ್ತು ರಾಜ್ಯದ ಗೋಶಾಲೆಗಳಲ್ಲಿ ಮೇವಿನ ಕೊರತೆ ಕುರಿತು ಪ್ರಸ್ತಾಪಿಸುವುದು.

೦೩. **ಡಾ: ಡಿ. ತಿಮ್ಮಯ್ಯ,** ಅವರು ಮೈಸೂರು ನಗರದ ಕೆಂಚಲಗೂಡು ಬಡಾವಣೆಯಲ್ಲಿ ವಿವೇಚನಾ ಕೋಟಾದಲ್ಲಿ ಲಭ್ಯವಿರುವ ನಿವೇಶನಗಳನ್ನು ಹಂಚಿಕೆ ಮಾಡುವ ಕುರಿತು ಪ್ರಸ್ತಾಪಿಸುವುದು.

**ಕೆ.ಆರ್. ಮಹಾಲಕ್ಷ್ಮಿ**
**ಕಾರ್ಯದರ್ಶಿ**

---

**ಪ್ರತಿ ದಿನದ ವಿಧಾನ ಪರಿಷತ್ತಿನ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.**
**www.kla.kar.nic.in/council/council.htm**